# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ನಿರ್ದೇಶಕರು, ಮಕ್ಕಳ ರಕ್ಷಣಾ ನಿರ್ದೇಶನಾಲಯ, ಬೆಂಗಳೂರು ಇವರನ್ನು ಕರ್ನಾಟಕ ರಾಜ್ಯ ಸಮಗ್ರ ಮಕ್ಕಳ ರಕ್ಷಣಾ ಸೊಸೈಟಿಯ ಸದಸ್ಯ ಕಾರ್ಯದರ್ಶಿಯನ್ನಾಗಿ ನೇಮಕ ಮಾಡುವ ಕುರಿತು.

ಓದಲಾಗಿದೆ:
1) ಸರ್ಕಾರದ ಆದೇಶ ಸಂಖ್ಯೆ: ಮಮಇ 71 ಮಭಾಬ 2009 ದಿನಾಂಕ:15.06.2010
2) ಸರ್ಕಾರದ ಆದೇಶ ಸಂಖ್ಯೆ: ಮಮಇ 467 ಎಸ್‌ಜೆಡಿ 2017 ದಿನಾಂಕ:15.11.2018
3) ಸರ್ಕಾರದ ಆದೇಶ ಸಂಖ್ಯೆ ಮಮಇ 143 ಮಭಾಬ 2018 ದಿನಾಂಕ:21.12.2018
4) ನಿರ್ದೇಶಕರು, ಮಕ್ಕಳ ರಕ್ಷಣಾ ನಿರ್ದೇಶನಾಲಯ, ಬೆಂಗಳೂರು ಇವರ ಪತ್ರ ಸಂಖ್ಯೆ ಮರನಿ/ಆಡಳಿತ/ಹುದ್ದೆ ಮರುವಿನ್ಯಾಸ/224/2021-22, ದಿನಾಂಕ:08.05.2021

17.05.2021

P.D.

***********

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ(1)ರ ಸರ್ಕಾರದ ಆದೇಶದಲ್ಲಿ ಸಮಗ್ರ ಮಕ್ಕಳ ರಕ್ಷಣಾ ಹೊಸ ಯೋಜನೆಯನ್ನು ಕೇಂದ್ರ ಸರ್ಕಾರವು ಹೊರಡಿಸಿರುವ ಮಾರ್ಗಸೂಚಿಯನ್ವಯ ಕೇಂದ್ರ ಸರ್ಕಾರದ ಸಮಗ್ರ ಮಕ್ಕಳ ರಕ್ಷಣಾ ಯೋಜನೆಯನ್ನು ಈಗಾಗಲೇ ಕೇಂದ್ರ ಸರ್ಕಾರದೊಡನೆ ಮಾಡಿಕೊಂಡಿರುವ ದಿನಾಂಕ:22.03.2010ರ ಒಪ್ಪಂದದನ್ವಯ ಅನುಷ್ಠಾನಗೊಳಿಸಲು ಮಂಜೂರಾತಿ ನೀಡುವುದರೊಂದಿಗೆ ಈ ಯೋಜನೆಯಡಿ ರಾಜ್ಯ ಮಕ್ಕಳ ರಕ್ಷಣಾ ಸೊಸೈಟಿಯನ್ನು ನಿಗದಿತ ಅವಧಿಯಲ್ಲಿ ಸ್ಥಾಪಿಸಲು ಮತ್ತು ಇತರೆ ಕ್ರಮಗಳನ್ನು ಕೈಗೊಳ್ಳಲು ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಇವರು ಅಗತ್ಯ ಕ್ರಮಗಳನ್ನು ಕೈಗೊಳ್ಳಲು ಆದೇಶಿಸಲಾಗಿರುತ್ತದೆ.

ಅದರಂತೆ ಕರ್ನಾಟಕ ರಾಜ್ಯ ಸಮಗ್ರ ಮಕ್ಕಳ ರಕ್ಷಣಾ ಸೊಸೈಟಿಯನ್ನು ಕರ್ನಾಟಕ ಸೊಸೈಟಿಗಳ ನೊಂದಣಿ ಕಾಯ್ದೆ 1960ರ ಅನ್ವಯ ದಿನಾಂಕ:14.01.2011ರಂದು ಸ್ಥಾಪಿಸಲಾಗಿದ್ದು, ಸೊಸೈಟಿಯ ಬೈಲಾ ಪ್ರಕಾರ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬೆಂಗಳೂರು ಇವರು ಸೊಸೈಟಿಯ ಸದಸ್ಯ ಕಾರ್ಯದರ್ಶಿಗಳಾಗಿರುತ್ತಾರೆ.

ಮೇಲೆ ಕ್ರಮ ಸಂಖ್ಯೆ(2)ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಮಕ್ಕಳ ಸುರಕ್ಷತೆಗಾಗಿ ಮತ್ತು ಯೋಜನೆಗಳ ಸಮರ್ಪಕ ಅನುಷ್ಠಾನಕ್ಕಾಗಿ ಹಾಗೂ ಮೇಲುಸ್ತುವಾರಿ ಮಾಡಲು ಕರ್ನಾಟಕ ರಾಜ್ಯ ಸಮಗ್ರ ಮಕ್ಕಳ ರಕ್ಷಣಾ ಸೊಸೈಟಿಯ ಪ್ರತ್ಯೇಕ ನಿರ್ದೇಶನಾಲಯವನ್ನು ಪ್ರಾರಂಭಿಸುವ ಸಂಬಂಧ ನಿರ್ದೇಶಕರು ಹಾಗೂ ಅವರಿಗೆ ಪೂರಕವಾಗುವಂತೆ ಆಪ್ತ ಸಹಾಯಕರು-1, "ಡಿ" ಗ್ರೂಪ್ ನೌಕರರು-1 ಮತ್ತು ವಾಹನ ಚಾಲಕರು-1 ಒಟ್ಟು 04ಹುದ್ದೆಗಳನ್ನು ಸೃಜಿಸಿ ಆದೇಶಿಸಿದೆ. ಉಳಿದ ಎಲ್ಲಾ ಇತರೆ ಹುದ್ದೆಗಳನ್ನು ಹೊಸದಾಗಿ ಸೃಜಿಸುವ ಬದಲು ಈಗಾಗಲೇ ಐಸಿಪಿಎಸ್ ಯೋಜನೆಯಡಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ಮರುವಿನ್ಯಾಸದೊಂದಿಗೆ ಕಾರ್ಯಗತಗೊಳಿಸಲು ತಿಳಿಸಿದೆ. ಮುಂದುವರೆದಂತೆ ಮೇಲೆ ಓದಲಾದ ಕ್ರ.ಸಂ.(3)ರ ಸರ್ಕಾರದ ಆದೇಶದಲ್ಲಿ 2018-19ನೇ ಸಾಲಿನ ಆಯವ್ಯಯ ಭಾಷಣದ ಘೋಷಣೆಯಂತೆ ಮಕ್ಕಳ ರಕ್ಷಣಾ ಯೋಜನೆಗಳ ಪರಿಣಾಮಕಾರಿ ಅನುಷ್ಠಾನಕ್ಕಾಗಿ ಪ್ರತ್ಯೇಕ ನಿರ್ದೇಶನಾಲಯವನ್ನು ರಚಿಸಲು ತಾತ್ವಿಕ ಅನುಮೋದನೆ ನೀಡಿ ಆದೇಶಿಸಲಾಗಿದೆ.

ಮೇಲೆ ಕ್ರಮ ಸಂಖ್ಯೆ(4)ರಲ್ಲಿ ಓದಲಾದ ಪತ್ರದಲ್ಲಿ ನಿರ್ದೇಶಕರು, ಮಕ್ಕಳ ರಕ್ಷಣಾ ನಿರ್ದೇಶನಾಲಯ, ಬೆಂಗಳೂರು ಇವರು ಮಕ್ಕಳ ರಕ್ಷಣಾ ಯೋಜನೆಗಳ ಪರಿಣಾಮಕಾರಿ ಅನುಷ್ಠಾನಕ್ಕಾಗಿ ಪ್ರತ್ಯೇಕ ನಿರ್ದೇಶನಾಲಯವನ್ನು 2018ರಲ್ಲಿ ಪ್ರಾರಂಭಿಸಲಾಗಿದ್ದು, ನಿರ್ದೇಶನಾಲಯವು ಸ್ವತಂತ್ರವಾಗಿ ಕಾರ್ಯನಿರ್ವಹಿಸಲು ಹಾಗೂ ತ್ವರಿತವಾಗಿ ಮಕ್ಕಳ ರಕ್ಷಣೆಗಾಗಿ ಇರುವ ಕಾರ್ಯಕ್ರಮಗಳನ್ನು ಪೂರ್ಣಪ್ರಮಾಣದಲ್ಲಿ ಕಾರ್ಯಗತಗೊಳಿಸಲು ಮಕ್ಕಳ ರಕ್ಷಣಾ ನಿರ್ದೇಶಕರು ಕರ್ನಾಟಕ ರಾಜ್ಯ ಸಮಗ್ರ ಮಕ್ಕಳ ರಕ್ಷಣಾ ಸೊಸೈಟಿಯ ಸದಸ್ಯ ಕಾರ್ಯದರ್ಶಿಯಾಗಿರುವುದು ಅತ್ಯವಶ್ಯಕವಾಗಿರುತ್ತದೆ ಅಲ್ಲದೇ ಸಮಗ್ರ ಮಕ್ಕಳ ರಕ್ಷಣಾ ಯೋಜನೆಯನ್ನು ಅನುಷ್ಠಾನಗೊಳಿಸುವ ಇಲಾಖೆಯ ಮುಖ್ಯಸ್ಥರೇ ಸಮಗ್ರ ಮಕ್ಕಳ ರಕ್ಷಣಾ ಸೊಸೈಟಿಯ ಪದನಿಮಿತ್ತ ಸದಸ್ಯ ಕಾರ್ಯದರ್ಶಿ ಆಗಬೇಕಾಗಿರುತ್ತದೆ. ಸಮಗ್ರ ಮಕ್ಕಳ ರಕ್ಷಣಾ ಯೋಜನೆಯ ಮಾರ್ಗಸೂಚಿಗಳು 2014ರ Chapter 12 Section 5 Annexure 1 para2.2, Director/Commissioner, Child Protection: he/she shall function as the Administrative Head of the Society at the State level and shall be responsible for management, supervision and monitoring of the overall functioning of the Society as well as the implementation of the ICPS ಎಂದಿದ್ದು, ಪ್ರಸ್ತುತ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಇವರು ಕರ್ನಾಟಕ ರಾಜ್ಯ ಸಮಗ್ರ ಮಕ್ಕಳ ಸೊಸೈಟಿಯ ಸದಸ್ಯ ಕಾರ್ಯದರ್ಶಿಗಳಾಗಿರುವುದರಿಂದ ಮಕ್ಕಳ ರಕ್ಷಣಾ ನಿರ್ದೇಶನಾಲಯವು ಸ್ವತಂತ್ರವಾಗಿ ಕಾರ್ಯನಿರ್ವಹಿಸಲು ಹಾಗೂ ತ್ವರಿತವಾಗಿ ಮಕ್ಕಳ ರಕ್ಷಣೆಗಾಗಿ ಇರುವ ಕಾರ್ಯಕ್ರಮಗಳನ್ನು ಪೂರ್ಣ ಪ್ರಮಾಣದಲ್ಲಿ ಕಾರ್ಯಗತಗೊಳಿಸಲು ಸಾಧ್ಯವಾಗುತ್ತಿಲ್ಲ. ಆಡಳಿತದ ಹಿತದೃಷ್ಟಿಯಿಂದ ಮಕ್ಕಳ ರಕ್ಷಣಾ ನಿರ್ದೇಶಕರನ್ನು ಕರ್ನಾಟಕ ರಾಜ್ಯ ಸಮಗ್ರ ಮಕ್ಕಳ ರಕ್ಷಣಾ ಸೊಸೈಟಿಯ ಸದಸ್ಯ ಕಾರ್ಯದರ್ಶಿಯನ್ನಾಗಿ ನೇಮಿಸುವಂತೆ ನಿರ್ದೇಶಕರು, ಮಕ್ಕಳ ರಕ್ಷಣಾ ನಿರ್ದೇಶನಾಲಯ ಇವರು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಮೇಲಿನ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಗಿನಂತೆ ಆದೇಶಿಸಿದೆ

**ಸರ್ಕಾರದ ಆದೇಶ ಸಂಖ್ಯೆ: ಮಮಇ 59 ಮಭಾಬ 2021, ಬೆಂಗಳೂರು, ದಿನಾಂಕ:17.05.2021**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ನಿರ್ದೇಶಕರು, ಮಕ್ಕಳ ರಕ್ಷಣಾ ನಿರ್ದೇಶನಾಲಯ, ಬೆಂಗಳೂರು ಇವರನ್ನು ಈ ತಕ್ಷಣದಿಂದಲೇ ಜಾರಿಗೆ ಬರುವಂತೆ ಕರ್ನಾಟಕ ರಾಜ್ಯ ಸಮಗ್ರ ಮಕ್ಕಳ ರಕ್ಷಣಾ ಸೊಸೈಟಿಯ ಸದಸ್ಯ ಕಾರ್ಯದರ್ಶಿಯನ್ನಾಗಿ ನೇಮಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

G. H. Sarojamma 17/05/2021
(ಜಿ.ಹೆಚ್. ಸರೋಜಮ್ಮ)
ಸರ್ಕಾರದ ಅಧೀನ ಕಾರ್ಯದರ್ಶಿ-3(ಪ್ರ)
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರೀಕರ
ಸಬಲೀಕರಣ ಇಲಾಖೆ(ಡಿ)

**ಇವರಿಗೆ:**

1. ಪ್ರಧಾನ ಮಹಾಲೇಖಪಾಲರು(ಎ&ಇ) ಕರ್ನಾಟಕ, ಪಾರ್ಕ್ ಹೌಸ್‌ರಸ್ತೆ, ಅಂಚೆಪೆಟ್ಟಿಗೆ ಸಂಖ್ಯೆ:5329, ಬೆಂಗಳೂರು-560001
2. ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬೆಂಗಳೂರು.
3. ನಿರ್ದೇಶಕರು, ಮಕ್ಕಳ ರಕ್ಷಣಾ ನಿರ್ದೇಶನಾಲಯ, ಬೆಂಗಳೂರು.

..3

4. ನಿರ್ದೇಶಕರು/ಜಂಟಿ ನಿರ್ದೇಶಕರು, ರಾಜ್ಯ ಹುಜೂರ್‌ಖಜಾನೆ, ಬೆಂಗಳೂರು
5. ಆಂತರಿಕ ಆರ್ಥಿಕ ಸಲಹೆಗಾರರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ವಿಕಾಸಸೌಧ, ಬೆಂಗಳೂರು
6. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ(ವೆಚ್ಚ-10), ವಿಧಾನಸೌಧ, ಬೆಂಗಳೂರು
7. ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು.
8. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು
9. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕರ್ನಾಟಕ ರಾಜ್ಯ ಸಮಗ್ರ ಮಕ್ಕಳ ರಕ್ಷಣಾ ಸೊಸೈಟಿಯ ಲೆಕ್ಕಾಧಿಕಾರಿ ಮತ್ತು ಲೆಕ್ಕಿಗರ ತಲಾ ಒಂದು ಹುದ್ದೆಯನ್ನು ಮಕ್ಕಳ ರಕ್ಷಣಾ ನಿರ್ದೇಶನಾಲಯಕ್ಕೆ ಮರುವಿನ್ಯಾಸಗೊಳಿಸುವ ಕುರಿತು.

ಓದಲಾಗಿದೆ: 1) ನಿರ್ದೇಶಕರು, ಮಕ್ಕಳ ರಕ್ಷಣಾ ನಿರ್ದೇಶನಾಲಯ, ಬೆಂಗಳೂರು ಇವರ ಏಕ ಕಡತ ಪ್ರಸ್ತಾವನೆ ಸಂಖ್ಯೆ:ಮರನಿ/ಆಡಳಿತ/ಹುದ್ದೆ ಮಂ/224/2020-21, ದಿನಾಂಕ:01.02.2021

17.05.2021 P.D.

2) ನಿರ್ದೇಶಕರು, ಮಕ್ಕಳ ರಕ್ಷಣಾ ನಿರ್ದೇಶನಾಲಯ, ಬೆಂಗಳೂರು ಇವರ ಪತ್ರ ಸಂಖ್ಯೆ ಮರನಿ/ಆಡಳಿತ/ಹುದ್ದೆ ಮರುವಿನ್ಯಾಸ/224/2021-22, ದಿನಾಂಕ:08.05.2021

**ಪ್ರಸ್ತಾವನೆ:**

ಮಕ್ಕಳ ರಕ್ಷಣಾ ನಿರ್ದೇಶನಾಲಯದಿಂದ ವೇತನವನ್ನು ಸೆಳೆಯಲು ಅನುವಾಗುವಂತೆ ಕರ್ನಾಟಕ ರಾಜ್ಯ ಸಮಗ್ರ ಮಕ್ಕಳ ರಕ್ಷಣಾ ಸೊಸೈಟಿಯ ಯೋಜನಾ ನಿರ್ದೇಶಕರ ಹುದ್ದೆ, ಲೆಕ್ಕಾಧಿಕಾರಿಗಳ ಹುದ್ದೆ ಮತ್ತು ಲೆಕ್ಕಿಗರ ತಲಾ ಒಂದು ಹುದ್ದೆಯನ್ನೊಳಗೊಂಡಂತೆ ಒಟ್ಟು 03ಹುದ್ದೆಗಳನ್ನು ಮಕ್ಕಳ ರಕ್ಷಣಾ ನಿರ್ದೇಶನಾಲಯಕ್ಕೆ ಮರುವಿನ್ಯಾಸಗೊಳಿಸಲು ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ದಿನಾಂಕ:01.02.2021ರ ಏಕ ಕಡತ ಪ್ರಸ್ತಾವನೆಯಲ್ಲಿ ಸರ್ಕಾರವನ್ನು ಕೋರಲಾಗಿದೆ. ಆದರೆ ಮೇಲೆ ಓದಲಾದ ಕ್ರಮ ಸಂಖ್ಯೆ(2)ರ ಪತ್ರದಲ್ಲಿ ಲೆಕ್ಕಾಧಿಕಾರಿ ಮತ್ತು ಲೆಕ್ಕಿಗರ ತಲಾ ಒಂದು ಹುದ್ದೆಯನ್ನು ಒಳಗೊಂಡಂತೆ ಒಟ್ಟು 02ಹುದ್ದೆಗಳನ್ನು ಮಾತ್ರ ಸೊಸೈಟಿಯಿಂದ ಮಕ್ಕಳ ರಕ್ಷಣಾ ನಿರ್ದೇಶನಾಲಯಕ್ಕೆ ಮರುವಿನ್ಯಾಸಗೊಳಿಸಲು ನಿರ್ದೇಶಕರು, ಮಕ್ಕಳ ರಕ್ಷಣಾ ನಿರ್ದೇಶನಾಲಯ, ಬೆಂಗಳೂರು ಇವರು ಕೋರಿರುತ್ತಾರೆ.

ಮೇಲಿನ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಗಿನಂತೆ ಆದೇಶಿಸಿದೆ

### ಸರ್ಕಾರದ ಆದೇಶ ಸಂಖ್ಯೆ: ಮಮಇ 13 ಮಭಾಬ 2021, ಬೆಂಗಳೂರು, ದಿನಾಂಕ:17.05.2021

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಕರ್ನಾಟಕ ರಾಜ್ಯ ಸಮಗ್ರ ಮಕ್ಕಳ ರಕ್ಷಣಾ ಸೊಸೈಟಿಯ ಈ ಕೆಳಕಂಡ ಹುದ್ದೆಗಳನ್ನು ಈ ಕೂಡಲೇ ಜಾರಿಗೆ ಬರುವಂತೆ ಮಕ್ಕಳ ರಕ್ಷಣಾ ನಿರ್ದೇಶನಾಲಯಕ್ಕೆ ಮರುವಿನ್ಯಾಸಗೊಳಿಸಿ ಆದೇಶಿಸಿದೆ.

| ಕ್ರ.ಸಂ. | ಹುದ್ದೆಯ ಪದನಾಮ | ಮರುವಿನ್ಯಾಸಗೊಳಿಸಿದ ಹುದ್ದೆಗಳ ಸಂಖ್ಯೆ |
|---|---|---|
| 1. | ಲೆಕ್ಕಾಧಿಕಾರಿ | 01 |
| 2. | ಲೆಕ್ಕಿಗರು | 01 |
| | ಒಟ್ಟು | 02 |

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 58 ವೆಚ್ಚ-10/ 2021, ದಿನಾಂಕ:11.02.2021ರಲ್ಲಿ ನೀಡಲಾದ ಸಹಮತಿಯ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

G. H. Sarojamma 17/05/2021

(ಜಿ.ಹೆಚ್.ಸರೋಜಮ್ಮ)
ಸರ್ಕಾರದಅಧೀನ ಕಾರ್ಯದರ್ಶಿ-3(ಪ್ರ)
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ
ಮತ್ತು ಹಿರಿಯ ನಾಗರೀಕರ ಸಬಲೀಕರಣ ಇಲಾಖೆ(ಡಿ)

**ಇವರಿಗೆ:**

1. ಪ್ರಧಾನ ಮಹಾಲೇಖಪಾಲರು(ಎ&ಇ) ಕರ್ನಾಟಕ, ಪಾರ್ಕ್ ಹೌಸ್‌ರಸ್ತೆ, ಅಂಚೆಪೆಟ್ಟಿಗೆ ಸಂಖ್ಯೆ:5329, ಬೆಂಗಳೂರು-560001
2. ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬೆಂಗಳೂರು.
3. ನಿರ್ದೇಶಕರು, ಮಕ್ಕಳ ರಕ್ಷಣಾ ನಿರ್ದೇಶನಾಲಯ, ಬೆಂಗಳೂರು.
4. ನಿರ್ದೇಶಕರು/ಜಂಟಿ ನಿರ್ದೇಶಕರು, ರಾಜ್ಯ ಹುಜೂರ್‌ಖಜಾನೆ, ಬೆಂಗಳೂರು
5. ಆಂತರಿಕ ಆರ್ಥಿಕ ಸಲಹೆಗಾರರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ವಿಕಾಸಸೌಧ, ಬೆಂಗಳೂರು
6. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ(ವೆಚ್ಚ-10), ವಿಧಾನಸೌಧ, ಬೆಂಗಳೂರು
7. ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು.
8. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು
9. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು